ಅ) ಗದಗ ತಾಲ್ಲೂಕು ಲಕ್ಕುಂಡಿಯನ್ನು ಪ್ರವಾಸೋದ್ಯಮದಲ್ಲಿ ಸೇರಿಸಿ ಇದನ್ನು ಅಭಿವೃದ್ಧಿ ಪಡಿಸಲು ಏನೇನು ಕ್ರಮ ಕೈಗೊಳ್ಳಲಾಗಿದೆ ಹಾಗೂ ಎಷ್ಟು ಹಣ ನಿಗಧಿ ಮಾಡಲಾಗಿದೆ ?

ಶ್ರೀ ಬಿ. ಶ್ರೀರಾಮುಲು ಪ್ರವಾಸೋದ್ಯಮ ಮತ್ತು ಜವಳಿ ಸಚಿವರು

ಅ) ಗದಗ್ ಜಿಲ್ಲೆ, ಗದಗ್ ತಾಲ್ಲೂಕಿನ ಲಕ್ಕುಂಡಿಯಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಕೆಳಕಂಡ ಸೌಲಭ್ಯಗಳನ್ನು ನಿರ್ಮಿಸಲು ಕ್ರಮ ಜರುಗಿಸಲಾಗಿದೆ.

1. ರೂ. 40.00ಲಕ್ಷಗಳ ಅಂದಾಜು ವೆಚ್ಚದಲ್ಲಿ ರಸ್ತೆ ಬದಿ ಸೌಲಭ್ಯ ನಿರ್ಮಾಣ ಮಾಡಲಾಗಿದೆ.

2. ರೂ. 8.00ಲಕ್ಷಗಳ ಅಂದಾಜು ವೆಚ್ಚದಲ್ಲಿ ಪ್ರವಾಸಿಗರಿಗೆ ಕುಡಿಯುವ ನೀರು ಹಾಗೂ ಶೌಚಾಲಯ ವ್ಯವಸ್ಥೆಗಳನ್ನು ಕಲ್ಪಿಸಲಾಗಿದೆ.

(29) 127 ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿನ ಲೋಕೋಪಯೋಗಿ ಇಲಾಖಾ ರಸ್ತೆಗಳ ದುರಸ್ತಿ ಕಾಮಗಾರಿಗಳಿಗೆ ವಾರ್ಷಿಕ ಅನುದಾನವನ್ನು ಬಿಡುಗಡೆ ಮಾಡುವ ಕ್ರಮವನ್ನು ಸರಕಾರ ಅನುಸರಿಸುತ್ತದೆಯೇ?

ಆ) ಒಂದು ಕಿ.ಮೀ. ಉದ್ದದ ರಸ್ತೆ ದುರಸ್ತಿಗೆ ಸರಕಾರ ನಿಗದಿಪಡಿಸಿರುವ ಮೊತ್ತ ಎಷ್ಟು ?

ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು

ಅ) ಹೌದು. ಅನುಸರಿಸುತ್ತಿದೆ.

ಆ) 2005–06ನೇ ಸಾಲಿಗೆ ಲೆಕ್ಕ ಶೀರ್ಷಿಕೆ 5054 ರಸ್ತೆ ಮತ್ತು ಸೇತುವೆ (ಯೋಜನೆ) ಅಡಿಯಲ್ಲಿ ಉತ್ತರ ಹಾಗೂ ದಕ್ಷಿಣ ವಲಯಗಳಿಗೆ ಬರುವ ಪ್ರತಿ ವಿಭಾಗಗಳ ಎಲ್ಲಾ ವಿಧಾನಸಭಾ ಕ್ಷೇತ್ರಕ್ಕೆ ತಲಾ ರೂ.20.00ಲಕ್ಷಗಳ ಅನುದಾನವನ್ನು ಜಿಲ್ಲಾ ಮುಖ್ಯರಸ್ತೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಬಿಡುಗಡೆ ಮಾಡಲಾಗಿದೆ. ಹಾಗೂ ಈ ಅನುದಾನದಿಂದ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ರೂ.40.00ಲಕ್ಷಗಳ ಅಂದಾಜು ಮೊತ್ತದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಲೆಕ್ಕ ಶೀರ್ಷಿಕೆ 3054 ರಸ್ತೆ ಮತ್ತು ಸೇತುವೆ (ಯೋಜನೆ) ಅಡಿಯಲ್ಲಿ ಜಿಲ್ಲಾ ಮುಖ್ಯ ರಸ್ತೆಗಳ ಅಭಿವೃದ್ಧಿ ಹಾಗೂ ನಿರ್ವಹಣೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಕಿ.ಮೀ. ಆಧಾರದ ಮೇಲೆ (ಪ್ರತಿ ಕಿ.ಮೀ.ಗೆ ರೂ.16,265.50ರಂತೆ) ವಿಭಾಗವಾರು ಹಂಚಿಕೆ ಮಾಡಲಾಗಿದೆ. ಇದಲ್ಲದೆ ಇದೇ ಲೆಕ್ಕ ಶೀರ್ಷಿಕೆಯಡಿ ರಸ್ತೆಯ ಸ್ಥಿತಿಯನುಸಾರ ಹಾಗೂ

ಅವಶ್ಯಕತೆಗನುಗುಣವಾಗಿ ಉತ್ತರ ಮತ್ತು ದಕ್ಷಿಣ ವಲಯಗಳ ವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಮುಖ್ಯರಸ್ತೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಸುಮಾರು ರೂ.100.00ಕೋಟಿಗಳಷ್ಟು ಅಂದಾಜು ಮೊತ್ತದಲ್ಲಿ ಕೈಗೆತ್ತಿಕೊಳ್ಳಲಾಗಿದೆ.

"ಮೂರು ವರ್ಷಗಳ ರಾಜ್ಯ ಹೆದ್ದಾರಿ ನಿರ್ವಹಣೆ" ಅಡಿಯಲ್ಲಿ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತ ಮೂಲಕ ಸುಮಾರು 14000 ಕಿ.ಮೀ. ರಾಜ್ಯ ಹೆದ್ದಾರಿಗಳ ನಿರ್ವಹಣೆಗಾಗಿ ಒಟ್ಟು ರೂ.45800.00ಲಕ್ಷಗಳ ಕಾಮಗಾರಿಗಳನ್ನು ಜಿಲ್ಲಾವಾರು ಕೈಗೆತ್ತಿಕೊಳ್ಳಲಾಗಿದೆ. ಒಂದು ವರ್ಷಕ್ಕೆ ಒಂದು ಕಿ.ಮೀ. ಉದ್ದ ರಾಜ್ಯ ಹೆದ್ದಾರಿ ನಿರ್ವಹಣೆಗಾಗಿ ರೂ.1.09ಲಕ್ಷಗಳ ವೆಚ್ಚ ಮಾಡಲಾಗುವುದು. ಹಾಗೂ ಮೂರು ವರ್ಷಕ್ಕೆ ಸೇರಿ ಒಟ್ಟು ರೂ.327ಲಕ್ಷಗಳನ್ನು ಒಂದು ಕಿ.ಮೀ. ನಿರ್ವಹಣೆಗಾಗಿ ವೆಚ್ಚ ಮಾಡಲಾಗುವುದು.

2005–06ನೇ ಸಾಲಿಗೆ "ಕೇಂದ್ರ ರಸ್ತೆ ನಿಧಿ" ಅಡಿಯಲ್ಲಿ ರೂ.10724.00 ಲಕ್ಷಗಳ ಅನುದಾನ ನಿಗಧಿಪಡಿಸಿದ್ದು ಜಿಲ್ಲಾ ಮುಖ್ಯರಸ್ತೆಗಳ ಮತ್ತು ರಾಜ್ಯ ಹೆದ್ದಾರಿಗಳ ಕಾಮಗಾರಿಗಳ ಪ್ರಗತಿಯನ್ನಾಧರಿಸಿ ಹಣ ಬಿಡುಗಡೆ ಮಾಡಲಾಗಿದೆ ಹಾಗೂ ಆಯವ್ಯಯದಲ್ಲಿ ಲೋಕೋಪಯೋಗಿ ಇಲಾಖೆಗೆ ಲಭ್ಯವಿರುವ ಅನುದಾನಕ್ಕೆ ಅನುಗುಣವಾಗಿ ಮಳೆಹಾನಿಯಿಂದ ಹಾಳಾದ ರಸ್ತೆಗಳ ದುರಸ್ತಿ ಕಾಮಗಾರಿಯನ್ನು ಹಾಗೂ ರಸ್ತೆಯ ಸ್ಥಿತಿಯನುಸಾರ ಗುಂಡಿ ಮುಚ್ಚುವುದು, ರಸ್ತೆ ಬಲಪಡಿಸುವುದು, ಅಡ್ಡಮೋರಿಗಳ ದುರಸ್ತಿ ಮತ್ತು ಅಭಿವೃದ್ಧಿಪಡಿಸುವುದು, ಮರುನಿರ್ಮಾಣ ಇತರೆ ಕೆಲಸಗಳನ್ನು ಅವಶ್ಯಕತೆ ಗನುಗುಣವಾಗಿ ನಿಗದಿತ ಕಾಲಾವಧಿಯಲ್ಲಿ ಇಲಾಖಾ ನಿಯಮಾವಳಿಯ ಅನುಸಾರ ಕಾರ್ಯಗತಗೊಳಿಸಲಾಗುತ್ತಿದೆ.

30, (128) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಉಪ ಗ್ರಾಮ ಯೋಜನೆಯಡಿಯಲ್ಲಿ ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯ ಎಷ್ಟು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಾಲೋನಿಗಳಿಗೆ ವಿದ್ಯುತ್ ಸಂಪರ್ಕವನ್ನು ಒದಗಿಸಿಕೊಡಲಾಗಿದೆ;

ಆ) ವಿದ್ಯುತ್ ಸಂಪರ್ಕ ಇಲ್ಲದಿರುವ ಇಂಥ ಕಾಲೋನಿಗಳಿಗೆ ಯಾವ ಯೋಜನೆಗಳಡಿಯಲ್ಲಿ ವಿದ್ಯುತ್ ಸೌಲಭ್ಯವನ್ನು ಕಲ್ಪಿಸಿಕೊಡಲು ಸರಕಾರ ಕ್ರಮ ಜರುಗಿಸುವುದು?